All India Radio: Bangalore
National Bulletin In Kannada
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

20.04.2026 19.35 p.m.

***************

ಮುಖ್ಯಾಂಶಗಳು

- ದಕ್ಷಿಣ ಕೊರಿಯಾ ಅಧ್ಯಕ್ಷರೊಂದಿಗೆ ಪ್ರಧಾನಿ ನರೇಂದ್ರ ಮೋದಿ ನಿಯೋಗ ಮಟ್ಟದ ಮಾತುಕತೆ; ನಾಲ್ಕು ಒಪ್ಪಂದಗಳಿಗೆ ಸಹಿ
- ಆಯಕಟ್ಟಿನ ಹಾರ್ಮುಜ್ ಜಲಸಂಧಿಯ ಮೂಲಕ ಸುಂಕ ರಹಿತ ಸಂಚಾರಕ್ಕೆ ಬ್ರಿಟನ್ ಕರೆ
- ಜಮ್ಮು-ಕಾಶ್ಮೀರದಲ್ಲಿ ಕಣಿವೆಗೆ ಉರುಳಿದ ಬಸ್; ೨೧ ಪ್ರಯಾಣಿಕರ ಸಾವು
- ಐಪಿಎಲ್ ಟಿ-೨೦ ಕ್ರಿಕೆಟ್; ಮುಂಬೈ ಇಂಡಿಯನ್ಸ್ ವಿರುದ್ಧ ಟಾಸ್ ಗೆದ್ದ ಗುಜರಾತ್ ಟೈಟನ್ಸ್ ಫೀಲ್ಡಿಂಗ್ ಆಯ್ಕೆ

****************

ಪ್ರಧಾನಿ ನರೇಂದ್ರ ಮೋದಿ ಅವರು ನವದೆಹಲಿಯಲ್ಲಿ ಇಂದು ದಕ್ಷಿಣ ಕೊರಿಯಾ ಅಧ್ಯಕ್ಷ ಲೀ ಜೇ ಮ್ಯುಂಗ್ ಅವರೊಂದಿಗೆ ನಿಯೋಗ ಮಟ್ಟದ ಮಾತುಕತೆ ನಡೆಸಿದರು.

ಈ ವೇಳೆ, ಭಾರತ ಮತ್ತು ದಕ್ಷಿಣ ಕೊರಿಯಾ ನಡುವೆ ಕ್ರೀಡೆ, ಸಂಸ್ಕೃತಿ ಮತ್ತು ಸೃಜನಶೀಲ ಕೈಗಾರಿಕೆಗಳ ಕ್ಷೇತ್ರಗಳಲ್ಲಿ ಪರಸ್ಪರ ಸಹಕಾರ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ನಾಲ್ಕು ಒಪ್ಪಂದಗಳಿಗೆ ಸಹಿ ಹಾಕಲಾಯಿತು. ಉಭಯ ದೇಶಗಳ ನಡುವಿನ ಸಮಗ್ರ ಆರ್ಥಿಕ ಪಾಲುದಾರಿಕೆ ಒಪ್ಪಂದ ಮತ್ತು ಭಾರತ-ಕೊರಿಯಾ ಡಿಜಿಟಲ್ ವ್ಯವಸ್ಥೆಯನ್ನು ಮೇಲ್ದರ್ಜೆಗೇರಿಸುವ ಮಾತುಕತೆಗಳನ್ನು ಪುನರಾರಂಭಿಸುವ ಕುರಿತು ಎರಡು ದೇಶಗಳು ಜಂಟಿ ಘೋಷಣೆಯನ್ನು ವಿನಿಮಯ ಮಾಡಿಕೊಂಡವು.

ನಂತರ ನಡೆದ ಜಂಟಿ ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿದ ಪ್ರಧಾನಿ ನರೇಂದ್ರ ಮೋದಿ, ಇಂಡೋ-ಫೆಸಿಫಿಕ್‌ಗೆ ಸೇರಿದಂತೆ ಎರಡೂ ದೇಶಗಳು ಸಾಮಾನ್ಯ ದೃಷ್ಟಿಕೋನವನ್ನು ಹೊಂದಿವೆ. ಕಳೆದ ೧೦ ವರ್ಷಗಳಲ್ಲಿ ಉಭಯ ದೇಶಗಳ ನಡುವಿನ ಸಂಬಂಧಗಳು ಸಮಗ್ರ ಮತ್ತು ಕ್ರಿಯಾತ್ಮಕವಾಗಿವೆ ಎಂದು ಹೇಳಿದರು.

ದಕ್ಷಿಣ ಕೊರಿಯಾ ಅಧ್ಯಕ್ಷ ಲೀ ಅವರ ಭೇಟಿಯೊಂದಿಗೆ ಎರಡೂ ರಾಷ್ಟ್ರಗಳ ನಡುವಿನ ವಿಶ್ವಾಸಾರ್ಹ ಪಾಲುದಾರಿಕೆಯು ಭವಿಷ್ಯದ ಪಾಲುದಾರಿಕೆಯಾಗಿ ಪರಿವರ್ತನೆಗೊಳ್ಳುತ್ತವೆ ಎಂದು ಆಶಿಸಿದರು.

ದಕ್ಷಿಣ ಕೊರಿಯಾ ಅಧ್ಯಕ್ಷ ಲೀ ಜೇ ಮ್ಯುಂಗ್ ಮಾತನಾಡಿ, ಭಾರತ, ಜಾಗತಿಕ ದಕ್ಷಿಣದಲ್ಲಿ ನಾಯಕನಾಗಿ ಹೊರಹೊಮ್ಮಿದೆ. ಎರಡೂ ರಾಷ್ಟ್ರಗಳು ರಕ್ಷಣೆ, ಕೃತಕಬುದ್ಧಿಮತ್ತೆ ಮತ್ತು ಹಡಗು ನಿರ್ಮಾಣದಲ್ಲಿ ಸಹಕಾರವನ್ನು ವಿಸ್ತರಿಸುತ್ತವೆ ಎಂದು ತಿಳಿಸಿದರು.

****************

ರಾಷ್ಟ್ರಪತಿ ದ್ರೌಪದಿ ಮುರ್ಮು ನಾಳೆ ಒಡಿಶಾಗೆ ಭೇಟಿ ನೀಡಲಿದ್ದಾರೆ. ಭೇಟಿಯ ಸಮಯದಲ್ಲಿ, ರಾಷ್ಟ್ರಪತಿಗಳು, ರೂರ್ಕೆಲಾದಲ್ಲಿ ನಡೆಯುವ ಸಾರ್ವಜನಿಕ ಸಮಾರಂಭದಲ್ಲಿ ತಾರಾಲಯ, ವಿಜ್ಞಾನ ಕೇಂದ್ರ ಮತ್ತು ನಿರ್ಮಲ್ ಮುಂಡಾ ಪರಿವೇಶ್ ಮಾರ್ಗವನ್ನು ಉದ್ಘಾಟಿಸಲಿದ್ದಾರೆ.

ರೂರ್ಕೆಲಾದಲ್ಲಿ ಬುಡಕಟ್ಟು ವಸ್ತುಸಂಗ್ರಹಾಲಯ, ಸಮಗ್ರ ಕಮಾಂಡ್ ಮತ್ತು ನಿಯಂತ್ರಣ ಕೇಂದ್ರವನ್ನು ಸಹ ರಾಷ್ಟ್ರಪತಿ ದ್ರೌಪದಿ ಮುರ್ಮು ಉದ್ಘಾಟಿಸಲಿದ್ದಾರೆ.

****************

ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್, ತಮ್ಮ ಶ್ರೀಲಂಕಾ ಪ್ರವಾಸದ ಎರಡನೇ ದಿನವಾದ ಇಂದು, ನುವಾರಾ ಎಲಿಯಾಗೆ ಭೇಟಿ ನೀಡಿ, ಭಾರತ ಬೆಂಬಲಿತ ಗೃಹ ನಿರ್ಮಾಣ ಯೋಜನೆಯ ನಿವೇಶನಗಳನ್ನು ವೀಕ್ಷಿಸಿದರು.

ಈ ವೇಳೆ, ಶ್ರೀಲಂಕಾ ಅಧ್ಯಕ್ಷ ಅನುರ ಕುಮಾರ ದಿಸ್ಸಾನಾಯಕೆ ಉಪಸ್ಥಿತರಿದ್ದರು.

ರಾಗಲಾದಲ್ಲಿನ ಲಿಡಲ್ಸ್‌ಡೇಲ್ ಎಸ್ಟೇಟ್‌ನಲ್ಲಿ, ಮೂರನೇ ಹಂತದ ವಸತಿ ಯೋಜನೆ ಅಡಿಯಲ್ಲಿ ಭಾರತ ನಿರ್ಮಿಸಿರುವ ಮನೆಗಳನ್ನು ವೀಕ್ಷಿಸಿ, ಫಲಾನುಭವಿಗಳೊಂದಿಗೆ ಸಂವಾದ ನಡೆಸಿದರು.

ಇದಕ್ಕೂ ಮುನ್ನ, ಸೀತಾ ಎಲಿಯಾದಲ್ಲಿರುವ ಸೀತಾ ಅಮ್ಮನ್ ದೇವಾಲಯಕ್ಕೆ ಭೇಟಿ ನೀಡಿ, ವಿಶೇಷ ಪೂಜೆ ಸಲ್ಲಿಸಿದರು.

****************

ಅಮೆರಿಕಾ ಮತ್ತು ಇರಾನ್ ನಡುವಿನ ಕದನ ವಿರಾಮದ ಬಗ್ಗೆ ಅನಿಶ್ಚಿತತೆಯ ನಡುವೆಯೂ, ಆಯಕಟ್ಟಿನ ಹಾರ್ಮುಜ್ ಜಲಸಂಧಿಯ ಮೂಲಕ ಸುಂಕ ರಹಿತ ಮಾರ್ಗಕ್ಕೆ ಬ್ರಿಟನ್ ಕರೆ ನೀಡಿದೆ.

ಈ ಕುರಿತು ಮಾತನಾಡಿದ ಬ್ರಿಟನ್ ವಿದೇಶಾಂಗ ಸಚಿವ ಯೆವೆಟ್ ಕೂಪರ್, ಪ್ರಮುಖ ಜಾಗತಿಕ ತೈಲ ಮಾರ್ಗವನ್ನು ಬಳಸುವ ಹಡಗುಗಳ ಮೇಲೆ ಯಾವುದೇ ನಿರ್ಬಂಧಗಳು ಅಥವಾ ಶುಲ್ಕವಿಲ್ಲದೆ ಸಂಪೂರ್ಣ ಸಂಚಾರ ಸ್ವಾತಂತ್ರ್ಯವನ್ನು ಖಚಿತಪಡಿಸಿಕೊಳ್ಳಲು ಪ್ರಯತ್ನಗಳು ನಡೆಯುತ್ತಿವೆ ಎಂದು ತಿಳಿಸಿದ್ದಾರೆ.

ಪೂರೈಕೆ ಸರಪಳಿಗಳನ್ನು ರಕ್ಷಿಸಲು, ಅಂತಾರಾಷ್ಟ್ರೀಯ ಕಾನೂನನ್ನು ಎತ್ತಿ ಹಿಡಿಯಲು ಮತ್ತು ಇಂಧನ ಹರಿವುಗಳಿಗೆ ಅಡ್ಡಿಯಾಗದಂತೆ ತಡೆಯಲು ಸಂಘಟಿತ ಜಾಗತಿಕ ಕ್ರಮ ಅತ್ಯಗತ್ಯ ಎಂದು ಅವರು ಪ್ರತಿಪಾದಿಸಿದ್ದಾರೆ.

****************

೯೭ ಸಾವಿರ ಮೆಟ್ರಿಕ್ ಟನ್ ಕಚ್ಚಾ ತೈಲವನ್ನು ಹೊತ್ತ ಭಾರತೀಯ ಧ್ವಜ ಹೊತ್ತ 'ದೇಶಗರಿಮಾ' ಕಚ್ಚಾ ಟ್ಯಾಂಕರ್ ಈ ತಿಂಗಳ ೧೮ ರಂದು ಹಾರ್ಮುಜ್ ಜಲಸಂಧಿಯನ್ನು ಸುರಕ್ಷಿತವಾಗಿ ದಾಟಿದೆ ಎಂದು ಬಂದರು ಮತ್ತು ಹಡಗು ಸಚಿವಾಲಯದ ನಿರ್ದೇಶಕ ಮಂದೀಪ್ ಸಿಂಗ್ ರಾಂಧವ ತಿಳಿಸಿದ್ದಾರೆ.

ನವದೆಹಲಿಯಲ್ಲಿಂದು ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು, ಕಳೆದ ೪೮ ಗಂಟೆಗಳಲ್ಲಿ, ಎರಡು ಭಾರತೀಯ ಹಡಗುಗಳಾದ 'ವಿಎಲ್‌ಸಿಸಿ ಸನ್ಮಾರ್ ಹೆರಾಲ್ಡ್' ಮತ್ತು ಬೃಹತ್ ವಾಹಕ 'ಜಗ್ ಅರ್ನವ್', ಹಾರ್ಮುಜ್ ಜಲಸಂಧಿಯನ್ನು ದಾಟಿ ಪರ್ಷಿಯನ್ ಕೊಲ್ಲಿಗೆ ಹಿಂತಿರುಗುವಾಗ ಗುಂಡಿನ ದಾಳಿ ನಡೆದ ಘಟನೆ ವರದಿಯಾಗಿದೆ. ಯಾವುದೇ ಸಿಬ್ಬಂದಿಗೆ ಗಾಯಗಳಾಗಿಲ್ಲ. ಸಚಿವಾಲಯವು ಸಿಬ್ಬಂದಿಯೊಂದಿಗೆ ನಿಕಟ ಮತ್ತು ನಿರಂತರ ಸಂಪರ್ಕದಲ್ಲಿದೆ ಮತ್ತು ಪರಿಸ್ಥಿತಿಯನ್ನು ಮೇಲ್ವಿಚಾರಣೆ ಮಾಡುತ್ತಿದೆ ಎಂದು ಅವರು ವಿವರಿಸಿದರು.

ವಿದೇಶಾಂಗ ಸಚಿವಾಲಯದ ಹೆಚ್ಚುವರಿ ಕಾರ್ಯದರ್ಶಿ ಅಸೆಮ್ ಆರ್. ಮಹಾಜನ್, ವಿದೇಶಾಂಗ ಸಚಿವಾಲಯವು ಗಲ್ಫ್ ಮತ್ತು ಪಶ್ಚಿಮ ಏಷ್ಯಾ ಪ್ರದೇಶದಲ್ಲಿನ ಬೆಳವಣಿಗೆಗಳನ್ನು ನಿಕಟವಾಗಿ ಮೇಲ್ವಿಚಾರಣೆ ಮಾಡುತ್ತಿದೆ ಮತ್ತು ಈ ಪ್ರದೇಶದಲ್ಲಿನ ಭಾರತೀಯ ಸಮುದಾಯದ ಸುರಕ್ಷತೆ, ಭದ್ರತೆ ಮತ್ತು ಕಲ್ಯಾಣವನ್ನು ಖಚಿತಪಡಿಸಿಕೊಳ್ಳುವತ್ತ ಸರ್ಕಾರದ ಪ್ರಯತ್ನಗಳು ನಡೆಯುತ್ತಿವೆ ಎಂದು ಹೇಳಿದರು.

****************

ದೇಶಾದ್ಯಂತ ದೇಶೀಯ ಎಲ್‌ಪಿಜಿ ಪೂರೈಕೆ ಸ್ಥಿರವಾಗಿದೆ. ಪಶ್ಚಿಮ ಏಷ್ಯಾ ಬಿಕ್ಕಟ್ಟಿನಿಂದ ಉಂಟಾದ ಅಡೆತಡೆಗಳ ನಡುವೆಯೂ ವಿತರಕರಲ್ಲಿ ಯಾವುದೇ ಕೊರತೆ ವರದಿಯಾಗಿಲ್ಲ ಎಂದು ಕೇಂದ್ರ ಸರ್ಕಾರ ಹೇಳಿದೆ.

ನವದೆಹಲಿಯಲ್ಲಿಂದು ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವಾಲಯದ ಕಾರ್ಯದರ್ಶಿ ಸುಜಾತಾ ಶರ್ಮಾ, ದೇಶೀಯ ಎಲ್‌ಪಿಜಿ ಉತ್ಪಾದನೆಯನ್ನು ಹೆಚ್ಚಿಸುವುದು, ನಗರ ಮತ್ತು ಗ್ರಾಮೀಣ ಪ್ರದೇಶಗಳಲ್ಲಿ ಬುಕಿಂಗ್ ಅವಧಿಯನ್ನು ವಿಸ್ತರಿಸುವುದು ಮತ್ತು ಬೇರೆಡೆಗೆ ತಿರುಗುವುದನ್ನು ತಡೆಯಲು ವಿತರಣಾ ದೃಢೀಕರಣ ಸಂಹಿತೆಯನ್ನು ಜಾರಿಗೆ

ತರುವಂತಹ ಪರಿಣಾಮಕಾರಿ ನಿರ್ವಹಣೆಗಾಗಿ ಸರ್ಕಾರ ಹಲವಾರು ಪ್ರಮುಖ ಕ್ರಮಗಳನ್ನು ತೆಗೆದುಕೊಳ್ಳುತ್ತಿದೆ ಎಂದು ಹೇಳಿದರು.

ವಿತರಣಾ ದೃಢೀಕರಣ ಸಂಕೇತ-ಡಿಎಸಿ ಬಳಕೆಯನ್ನು ಸರ್ಕಾರ ಶೇಕಡಾ ೯೦ ಕ್ಕೆ ಹೆಚ್ಚಿಸುವ ಗುರಿಯನ್ನು ಹೊಂದಿತ್ತು. ಆದರೆ ಅದು ಈಗಾಗಲೇ ಶೇಕಡಾ ೯೨ ಕ್ಕೆ ತಲುಪಿದೆ. ವಾಣಿಜ್ಯ ಸರಬರಾಜುಗಳನ್ನು ಶೇಕಡಾ ೭೦ ರಷ್ಟು ಪುನಃಸ್ಥಾಪಿಸಲಾಗಿದೆ ಎಂದರು.

ಕಳೆದ ಐದು ದಿನಗಳ ಮಾಹಿತಿಯ ಪ್ರಕಾರ, ೫ ಕೆಜಿ ಸಿಲಿಂಡರ್‌ಗಳ ಮಾರಾಟವೂ ಹೆಚ್ಚಾಗಿದೆ. ಏಪ್ರಿಲ್ ೩ ರಿಂದ ಸುಮಾರು ೭ ಸಾವಿರ ಶಿಬಿರಗಳನ್ನು ಆಯೋಜಿಸಲಾಗಿದೆ. ಇದು ಸುಮಾರು ಒಂದು ಲಕ್ಷ ೫ ಕೆಜಿ ಸಿಲಿಂಡರ್‌ಗಳ ಮಾರಾಟಕ್ಕೆ ಕಾರಣವಾಗಿದೆ ಎಂದು ಸುಜಾತಾ ಶರ್ಮಾ ತಿಳಿಸಿದರು.

****************

ಜಮ್ಮು ಮತ್ತು ಕಾಶ್ಮೀರದ ಉಧಂಪುರ ಜಿಲ್ಲೆಯಲ್ಲಿ ಬಸ್ ಕಣಿವೆಗೆ ಉರುಳಿ ಬಿದ್ದ ಪರಿಣಾಮ ೨೧ ಜನರು ಸಾವನ್ನಪ್ಪಿದ್ದು, ೨೯ ಪ್ರಯಾಣಿಕರು ಗಾಯಗೊಂಡಿದ್ದಾರೆ.

ಬಸ್ ಅಪಘಾತದಲ್ಲಿ ಮೃತಪಟ್ಟವರ ಕುಟುಂಬಕ್ಕೆ ರಾಷ್ಟ್ರಪತಿ ದ್ರೌಪದಿ ಮುರ್ಮು ಮತ್ತು ಪ್ರಧಾನಿ ನರೇಂದ್ರ ಮೋದಿ ಸಂತಾಪ ಸೂಚಿಸಿದ್ದಾರೆ.

ಅಪಘಾತದಲ್ಲಿ ಮೃತಪಟ್ಟವರ ಕುಟುಂಬಕ್ಕೆ ಪ್ರಧಾನಮಂತ್ರಿಗಳ ರಾಷ್ಟ್ರೀಯ ಪರಿಹಾರ ನಿಧಿಯಿಂದ ಎರಡು ಲಕ್ಷ ರೂಪಾಯಿಗಳ ಪರಿಹಾರ ಹಾಗೂ ಗಾಯಾಳುಗಳಿಗೆ ತಲಾ ೫೦ ಸಾವಿರ ರೂಪಾಯಿಗಳ ಪರಿಹಾರವನ್ನು ಪ್ರಧಾನಿ ಘೋಷಿಸಿದ್ದಾರೆ.

****************

ತಮಿಳುನಾಡಿನಲ್ಲಿ ಒಂದೇ ಹಂತ ಮತ್ತು ಪಶ್ಚಿಮ ಬಂಗಾಳದಲ್ಲಿ ಮೊದಲ ಹಂತದ ಚುನಾವಣೆಯ ಬಹಿರಂಗ ಪ್ರಚಾರಕ್ಕೆ ನಾಳೆ ತೆರೆ ಬೀಳಲಿದೆ.

ವಿವಿಧ ರಾಜಕೀಯ ಪಕ್ಷಗಳ ಉನ್ನತ ನಾಯಕರು ಸತತ ರ‍್ಯಾಲಿಗಳು ಮತ್ತು ಸಾರ್ವಜನಿಕ ಸಭೆಗಳ ಮೂಲಕ ಮತದಾರರನ್ನು ಸೆಳೆಯಲು ಅಂತಿಮ ಪ್ರಯತ್ನ ನಡೆಸಿದರು. ಎರಡೂ ರಾಜ್ಯಗಳಲ್ಲಿ ಇದೇ ಗುರುವಾರ ಮತದಾನ ನಡೆಯಲಿದೆ.

ಪಶ್ಚಿಮ ಬಂಗಾಳ ಹಾಗೂ ತಮಿಳುನಾಡಿನಲ್ಲಿ ಮುಕ್ತ ಮತ್ತು ನ್ಯಾಯಸಮ್ಮತ ಮತದಾನ ಖಚಿತಪಡಿಸಿಕೊಳ್ಳಲು ಚುನಾವಣಾ ಆಯೋಗ, ಮತದಾನಕ್ಕೆ ಮುಂಚಿತವಾಗಿ ೪೮ ಗಂಟೆಗಳ ಕಾಲ ಮದ್ಯ ನಿಷೇಧಿಸಿ ಆದೇಶ ಹೊರಡಿಸಿದೆ.

***************

ದೇಶಾದ್ಯಂತ ಪ್ರಮುಖ ಗ್ರಾಮೀಣ ಕಲ್ಯಾಣ ಮತ್ತು ಮೂಲಸೌಕರ್ಯ ಕಾರ್ಯಕ್ರಮಗಳ ಅಡೆತಡೆಯಿಲ್ಲದೆ ಅನುಷ್ಠಾನವನ್ನು ಖಚಿತಪಡಿಸಿಕೊಳ್ಳಲು ಗ್ರಾಮೀಣಾಭಿವೃದ್ಧಿ ಸಚಿವಾಲಯವು ಸಿದ್ಧತೆ ಕ್ರಮಗಳ ಸಮಗ್ರ ಪರಿಶೀಲನೆಯನ್ನು ಕೈಗೊಂಡಿದೆ ಎಂದು ಗ್ರಾಮೀಣಾಭಿವೃದ್ಧಿ ಸಚಿವಾಲಯದ ಜಂಟಿ ಕಾರ್ಯದರ್ಶಿ ಅಮಿತ್ ಶುಕ್ಲಾ ಹೇಳಿದ್ದಾರೆ.

ನವದೆಹಲಿಯಲ್ಲಿಂದು ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು, ಜಾಗತಿಕ ಅನಿಶ್ಚಿತತೆಗಳ ಹೊರತಾಗಿಯೂ ಸರ್ಕಾರದ ಪ್ರಾಥಮಿಕ ಗಮನವು ನಿರಂತರ ಉದ್ಯೋಗ, ಸಕಾಲಿಕ ನಿಧಿಯ ಹರಿವು, ವಸತಿ ನಿರ್ಮಾಣ, ಗ್ರಾಮೀಣ ರಸ್ತೆಗಳು ಮತ್ತು ಜೀವನೋಪಾಯ ಭದ್ರತೆಯಾಗಿದೆ ಎಂದರು.

೨೦೨೫ರ ವಿಕಸಿತ ಭಾರತ ಜಿ ರಾಮ್ ಜಿ ಕಾಯ್ದೆ ಜಾರಿಗೆ ಬರುವವರೆಗೆ ೨೦೦೫ರ ಮಹಾತ್ಮಾಗಾಂಧಿ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ ಸಂಪೂರ್ಣವಾಗಿ ಚಾಲ್ತಿಯಲ್ಲಿರಲಿದೆ ಎಂದು ಅವರು ಸ್ಪಷ್ಟಪಡಿಸಿದರು.

ಉದ್ಯೋಗ ಖಾತ್ರಿ ಯೋಜನೆಯ ಪರಿಣಾಮಕಾರಿ ಅನುಷ್ಠಾನಕ್ಕಾಗಿ ಮೊದಲ ಹಂತದಲ್ಲಿ ೧೭ ಸಾವಿರದ ೭೪೪ ಕೋಟಿ ರೂಪಾಯಿ ಅನುದಾನ ಒದಗಿಸಲಾಗಿದೆ ಎಂದು ಅಮಿತ್ ಶುಕ್ಲಾ ತಿಳಿಸಿದರು.

***************

ಅಹಮದಾಬಾದ್‌ನ ನರೇಂದ್ರ ಮೋದಿ ಕ್ರೀಡಾಂಗಣದಲ್ಲಿ ಇಂದು ನಡೆಯುತ್ತಿರುವ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ಗುಜರಾತ್ ಟೈಟಾನ್ಸ್ ಹಾಗೂ ಮುಂಬೈ ಇಂಡಿಯನ್ಸ್ ತಂಡಗಳು ಮುಖಾಮುಖಿಯಾಗಿವೆ.

ಟಾಸ್ ಗೆದ್ದ ಗುಜರಾತ್ ಟೈಟಾನ್ಸ್, ಫೀಲ್ಡಿಂಗ್ ಆಯ್ಕೆ ಮಾಡಿಕೊಂಡಿದೆ.

***************

೧೮ ವರ್ಷದೊಳಗಿನ ಪುರುಷ ಮತ್ತು ಮಹಿಳಾ ಹಾಕಿ ಪಂದ್ಯಾವಳಿಯ ತರಬೇತಿ ಶಿಬಿರಕ್ಕಾಗಿ ೪೨ ಪುರುಷರು ಮತ್ತು ೪೨ ಮಹಿಳೆಯರ ಪಟ್ಟಿಯನ್ನು ಇಂದು ಭೋಪಾಲ್‌ನ ಭಾರತೀಯ ಕ್ರೀಡಾ ಪ್ರಾಧಿಕಾರ ಪ್ರಕಟಿಸಿದೆ.

೧೬ನೇ ಹಾಕಿ ಇಂಡಿಯಾ ಸಬ್ ಜೂನಿಯರ್ ರಾಷ್ಟ್ರೀಯ ಚಾಂಪಿಯನ್‌ಶಿಪ್‌ನಲ್ಲಿ ತೋರಿದ ಪ್ರದರ್ಶನದ ಆಧಾರದ ಮೇಲೆ ಆಟಗಾರರನ್ನು ಆಯ್ಕೆ ಮಾಡಲಾಗಿದೆ.

ಭೋಪಾಲ್‌ನಲ್ಲಿ ಮೇ ೧೧ ರಿಂದ ೨೧ ರವರೆಗೆ ನಡೆಯುವ ಸರಣಿಯಲ್ಲಿ ಆಸ್ಟ್ರೇಲಿಯಾದ ೧೮ ವರ್ಷದೊಳಗಿನ ತಂಡಗಳ ವಿರುದ್ಧ ಅಭ್ಯಾಸ ಪಂದ್ಯಗಳನ್ನು ಆಡಲಿದ್ದಾರೆ.

ರಾಣಿ ರಾಂಪಾಲ್ ಮಹಿಳಾ ಶಿಬಿರದ ನೇತೃತ್ವ ವಹಿಸಲಿದ್ದಾರೆ. ಸರ್ದಾರ್ ಸಿಂಗ್ ಮತ್ತು ರಜನೀಶ್ ಮಿಶ್ರಾ ಪುರುಷರ ಶಿಬಿರದ ಉಸ್ತುವಾರಿ ವಹಿಸಲಿದ್ದಾರೆ.

********ಮುಕ್ತಾಯ********